ಈ) ಉಪ ಆರೋಗ್ಯ ಕೇಂದ್ರಗಳಲ್ಲಿರುವ ಎ.ಎನ್.ಎಂ.ಗಳ ಕೊರತೆಯನ್ನು ಕೂಡಲೇ ನಿವಾರಿಸಲು ಸರ್ಕಾರವು ಶೀಘ್ರ ಕ್ರಮಕೈಗೊಳ್ಳುವುದೆ?

ಡಾ: ಎ.ಬಿ.ಮಾಲಕರೆಡ್ಡಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ):

ಅ) ಬಂದಿದೆ.

ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಮತ್ತು ವೈದ್ಯೇತರ ಕೆಲವು ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ಭರ್ತಿ ಮಾಡಲು ಜಿಲ್ಲಾಧಿಕಾರಿಗಳಿಗೆ ಅಧಿಕಾರ ನೀಡಲಾಗಿದೆ. ವಿಶೇಷ ನೇಮಕಾತಿ ಮೂಲಕ 550 ವೈದ್ಯರ ಹುದ್ದೆಗಳನ್ನು ತುಂಬಲು ಪ್ರಕ್ರಿಯೆ ನಡೆಯುತ್ತಿದೆ.

ಆ) ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ, ರೂ.75,000 30 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರಗಳಿಗೆ ರೂ.2 ಲಕ್ಷ ಹಾಗೂ 50 ಹಾಸಿಗೆಗಳ ಸಮುದಾಯ ಆರೋಗ್ಯ ಕೇಂದ್ರಗಳಿಗೆ 3 ಲಕ್ಷ ರೂ.ಗಳ ಔಷಧಿಗಳನ್ನು ಸರಬರಾಜು ಮಾಡಲಾಗುತ್ತಿದೆ. ಅದಲ್ಲದೆ, ಪ್ರಧಾನ ಮಂತ್ರಿಯವರ ಗ್ರಾಮೋದಯ ಯೋಜನೆಯಡಿಯಲ್ಲಿ ಪ್ರತಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ 10,000 ರೂ.ಗಳನ್ನು ಒದಗಿಸಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಉಪ ಆರೋಗ್ಯ ಕೇಂದ್ರಗಳಲ್ಲಿ 19 ಕೆ.ಮ.ಆ.ಸ. ಹುದ್ದೆ ಖಾಲಿ ಇದ್ದು ಅವುಗಳಲ್ಲಿ 2 ಹುದ್ದೆಗಳನ್ನು ಜಿಲ್ಲಾಧಿಕಾರಿಗಳು ಮಂಗಳೂರು ಇವರು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿರುತ್ತಾರೆ. ಉಳಿದ ಹುದ್ದೆಗಳನ್ನು ಇಲಾಖೆಯಲ್ಲಿ ತರಬೇತಿ ಹೊಂದಿದ ಅಭ್ಯರ್ಥಿಗಳಿಂದ ನೇಮಕಾತಿ ಮಾಡಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ.

ಬೆಳ್ತಂಗಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರ ಕೊರತೆ.

1849(1858)

ಶ್ರೀ ಪ್ರಭಾಕರ ಬಂಗೇರ ಕೆ.(ಬೆಳ್ತಂಗಡಿ): ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೆಳ್ತಂಗಡಿಯಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಉಪನ್ಯಾಸಕರುಗಳ ಕೊರತೆಯಿಂದಾಗಿ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಈ ಕುರಿತು ಸರ್ಕಾರ ಕೈಗೊಂಡ ಕ್ರಮಗಳೇನು? ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

2. ಸದರಿ ಕಾಲೇಜಿಗೆ ಆಡಿಟೋರಿಯಂ ಅನ್ನು ಸರ್ಕಾರ ಯಾವಾಗ ನಿರ್ಮಿಸಿಕೊಡಲು ಕ್ರಮ ಕೈಗೊಳ್ಳುವುದು? ಹಾಗಿದ್ದಲ್ಲಿ ಈ ಕುರಿತು ಪ್ರಕ್ರಿಯೆಗಳು ಪ್ರಾರಂಭವಾಗಿದೆಯೇ? ವಿವರಗಳನ್ನು ತಿಳಿಸುವುದು;

Dr. G.PARAMESHWAR (Minister of State for Higher Education Science and Technology):

1. ಬೆಳ್ತಂಗಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ರಸ್ತುತ ಇಂಗ್ಲೀಷ್ ವಿಷಯಕ್ಕೆ ಒಬ್ಬರು ಮತ್ತು ವಾಣಿಜ್ಯಶಾಸ್ತ್ರ ವಿಷಯಕ್ಕೆ ಒಬ್ಬರು (3) ಉಪನ್ಯಾಸಕರುಗಳ ಕೊರತೆ ಇರುತ್ತದೆ. ಇತರೆ ಕಾಲೇಜುಗಳಲ್ಲಿ ಕಾರ್ಯಭಾರದ ಕೊರತೆಯಿಂದ ಹೆಚ್ಚುವರಿಯಾಗಿರುವ ಉಪನ್ಯಾಸಕರುಗಳನ್ನು ವರ್ಗಾಯಿಸುವ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

2. ಯಾವುದೇ ಪ್ರಸ್ತಾವನೆ ಇರುವುದಿಲ್ಲ

ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಪ್ರೌಢಶಾಲೆಗಳು ಮತ್ತು ಪದವಿ ಪೂರ್ವ ಶಾಲೆಗಳಿಗೆ ಕೊಠಡಿಗಳ ಅಭಾವ.

1850(1860)

ಶ್ರೀ ಪ್ರಭಾಕರ ಬಂಗೇರ.ಕೆ.(ಬೆಳ್ತಂಗಡಿ): ಮಾನ್ಯ ಪ್ರಾಥಮಿಕ ಹಾಗೂ ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

1. ಬೆಳ್ತಂಗಡಿ ತಾಲ್ಲೂಕಿನ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಿಗೆ ಕೊಠಡಿಗಳ ಅಭಾವವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ? ಹಾಗಿದ್ದಲ್ಲಿ ಅವಶ್ಯಕತೆಗಳಿಗನುಗುಣವಾಗಿ ಎಷ್ಟು ಕೊಠಡಿಗಳು ಈ ಕಾಲೇಜುಗಳಿಗೆ ಬೇಕಾಗುತ್ತದೆ. ಅವುಗಳ ನಿರ್ಮಾಣಕ್ಕೆ ಸರ್ಕಾರದ ಕ್ರಮಗಳೇನು?

2) ಜಿಲ್ಲೆಯಲ್ಲಿನ ಹಿರಿಯ ಕಿರಿಯ ಹಾಗೂ ಪ್ರೌಢಶಾಲೆಗಳಿಗೆ ಆವರಣ ಗೋಡ